2	ಮುಖ್ಯಮಂತ್ರಿ ಗ್ರಾಮೀಣ ಅಭಿವೃದ್ಧಿ ಯೋಜನೆ (3054)	51	199.24	11	26.5
3	12ನೇ ಹಣಕಾಸು ಯೋಜನೆ (ರಸ್ತೆಗಳ ನಿರ್ವಹಣೆ)	133	418.51	43	76.16
4	ನಬಾರ್ಡ್	5	59.00	1	13.00
5	ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆ	10	799.98	1	61.90

ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗೆ ಸ್ವಂತ ಕಟ್ಟಡ ಇಲ್ಲದೇ ಇರುವುದು

236(1420) : ಶ್ರೀ ಶಿವಾನಂದ ಎಸ್. ಪಾಟೀಲ್ (ಬಸವನಬಾಗೇವಾಡಿ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವನಬಾಗೇವಾಡಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಎಷ್ಟು ವರ್ಷದಿಂದ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದೆ ;

ಆ) ಈ ಕಟ್ಟಡಕ್ಕೆ ನೀಡುತ್ತಿರುವ ಮಾಸಿಕ ಬಾಡಿಗೆ ಹಣ ಎಷ್ಟು ;

ಇ) ಕ್ಷೇತ್ರ ಶಿಕ್ಷಣಾಧಿಕಾರಿಯವರ ಕಾರ್ಯಾಲಯ ನಿರ್ಮಿಸಲು ದಾನಿಗಳೊಬ್ಬರು ಜಮೀನು ಧಾನ ನೀಡಿರುವುದು ಸರ್ಕಾರಕ್ಕೆ ತಿಳಿದಿದೆಯೇ ;

ಈ) ಹಾಗಾದರೆ ಲಭ್ಯವಿದ್ದ ಜಮೀನಿನಲ್ಲಿ ಸ್ವಂತ ಕಟ್ಟಡ ನಿರ್ಮಿಸದೇ ಇರಲು ಕಾರಣವೇನು ;

ಉ) ಸರ್ಕಾರ ಬಾಡಿಗೆಯ ಹೊರೆ ತಪ್ಪಿಸಲು ಸ್ವಂತ ಕಟ್ಟಡ ನಿರ್ಮಿಸಲು ಅನುದಾನ ನೀಡಿ ಕಟ್ಟಡ ನಿರ್ಮಿಸುವುದೇ ;

ಊ) ಯಾವ ಕಾಲ ಮಿತಿಯೊಳಗೆ ಸ್ವಂತ ಕಟ್ಟಡ ನಿರ್ಮಿಸಲಾಗುವುದು ?

ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) –

ಅ) ಬಸವನಬಾಗೇವಾಡಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯವು ಎಪಿಎಂಸಿ ರೈತಭವನ ಇಲ್ಲಿ ದಿ. 7.6.2003ರಿಂದ ಕಾರ್ಯನಿರ್ವಹಿಸುತ್ತಿದೆ.

ಆ) ಈ ಕಟ್ಟಡಕ್ಕೆ ಪ್ರತಿ ತಿಂಗಳು ರೂ.4225.00 ಪಿ.ಡಬ್ಲ್ಯೂ.ಡಿ. ಇಲಾಖೆಯಿಂದ ನಿಗದಿಪಡಿಸಿರುವಂತೆ ಈವರೆಗೆ ಬಾಡಿಗೆ ನೀಡಲಾಗುತ್ತಿದೆ.

ಇ) ಹೌದು. ಬಸವನಬಾಗೇವಾಡಿ ನಿವಾಸಿಯಾದ ಶ್ರೀ ಭೀಮಪ್ಪ, ಮಾನಪ್ಪ, ಲಮಾಣಿ ಇವರ ಸರ್ವೆ ನಂಬರ್ 346 2ಬಿರಲ್ಲಿ 9 ಗುಂಟೆ ಜಮೀನನ್ನು ದಾನವಾಗಿ ನೀಡಿರುತ್ತಾರೆ.

ಈ) ಕಛೇರಿ ಕಟ್ಟಡ ನಿರ್ಮಿಸಲು ಪ್ಲಾನ್ ಮತ್ತು ಎಸ್ಟಿಮೇಟ್ ಪ್ರಕಾರ ರೂ.1674800.00ಗಳೂ ಬೇಕಾಗುತ್ತದೆ.

ಹೊಸ ಕಟ್ಟಡ ನಿರ್ಮಾಣಕ್ಕೆ ಅನುದಾನ ಲಭ್ಯತೆಯಿಲ್ಲದಿರುವ ಕಾರಣ ಕಟ್ಟಡ ನಿರ್ಮಿಸಿಲ್ಲ.

ಉ) ಅನುದಾನ ಲಭ್ಯತೆಯನ್ನು ಆಧರಿಸಿ ಸ್ವಂತ ಕಟ್ಟಡ ನಿರ್ಮಿಸಲು ಮುಂದಿನ ವರ್ಷದಲ್ಲಿ ಕ್ರಮ ಕೈಗೊಳ್ಳಲಾಗುವುದು.

ಊ) ಅನುದಾನ ಬಿಡುಗಡೆಯಾದ ನಂತರ ಕಟ್ಟಡ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು.

ಅನುಬಂಧ (ಆ)

ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಿರುವ ಪ್ರಶ್ನೋತ್ತರಗಳು

799(1035) : ಶ್ರೀ ಅಕ್ಕಿ ಮಲ್ಲಿಕಾರ್ಜುನ ಸಹದೇವಪ್ಪ (ಕುಂದಗೋಳ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಜಿಲ್ಲಾ ಪಂಚಾಯತ್‌ಗೆ ಒಳಪಡುವ ಎಷ್ಟು ಕಿಲೋ ಮೀಟರ್ ರಸ್ತೆಗಳಿವೆ ;

ಆ) ಈ ಜಿಲ್ಲೆಯಲ್ಲಿ ಎಷ್ಟು ಕಿಲೋ ಮೀಟರ್ ರಸ್ತೆಗಳು ಡಾಂಬರೀಕರಣ ವಾಗದೆ ಉಳಿದಿದೆ ;

ಇ) ಡಾಂಬರೀಕರಣ ಮಾಡಲು ಕೈಗೊಂಡ ಕ್ರಮವೇನು ?

ಶ್ರೀ ಸಿ.ಎಂ. ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು)–

ಅ) ಧಾರವಾಡ ಜಿಲ್ಲಾ ಪಂಚಾಯತ್ ವ್ಯಾಪ್ತಿಗೆ ಒಳಪಡುವ ರಸ್ತೆ ಉದ್ದ 3258 ಕಿ.ಮೀ.ಗಳು.

ಆ) ಈ ಜಿಲ್ಲೆಯಲ್ಲಿ ಡಾಂಬರೀಕರಣವಾಗದೆ ಉಳಿದ ರಸ್ತೆ ಉದ್ದ 2532.95 ಕಿ.ಮೀ.ಗಳು

ಇ) ಗ್ರಾಮೀಣ ರಸ್ತೆಗಳ ಡಾಂಬರೀಕರಣ ಮತ್ತು ಅಭಿವೃದ್ಧಿಗಾಗಿ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತದೆ. ಧಾರವಾಡ ಜಿಲ್ಲಾ ಪಂಚಾಯತ್‌ಗೆ ಪ್ರಸಕ್ತ ಸಾಲಿನಲ್ಲಿ ಕೆಳಕಂಡಂತೆ ಅನುದಾನ ಒದಗಿಸಲಾಗಿದೆ.